# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1206 (1264) |
| 2 | ಸದಸ್ಯರ ಹೆಸರು | : | ಶ್ರೀಮತಿ ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 24.12.2021 |
| 4 | ಉತ್ತರಿಸುವ ಸಚಿವರು | : | ಮಾನ್ಯ ಯೋಜನೆ,ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ 2016-17 ರಿಂದ 2020-21 ರವರೆಗೆ ಮಾನ್ಯ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಗೆ ಸಂಬಂಧಿಸಿದಂತೆ, ಪ್ರತಿಯೊಂದು ವರ್ಷದಲ್ಲೂ ಮಾನ್ಯ ಶಾಸಕರುಗಳು ಸೂಚಿಸಿರುವ ರೂ.2.00 ಕೋಟಿ ಮೊತ್ತದ ಕಾಮಗಾರಿಗಳಿಗೆ ಅನುದಾನ ಒದಗಿಸಲಾಗಿದೆಯೇ; (ಪ್ರತಿ ವರ್ಷದ ಅನುದಾನದ ವಿವರಗಳನ್ನು ಪ್ರತ್ಯೇಕವಾಗಿ ನೀಡುವುದು) | ಹೌದು<br>2016-17ನೇ ಸಾಲಿನಿಂದ ರಿಂದ 2019-20ನೇ ಸಾಲಿನವರೆಗೆ ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಗೆ ಸಂಬಂಧಿಸಿದಂತೆ, ಪ್ರತಿಯೊಂದು ವರ್ಷದಲ್ಲೂ ಮಾನ್ಯ ಶಾಸಕರುಗಳು ಸೂಚಿಸಿರುವ ರೂ.2.00 ಕೋಟಿ ಮೊತ್ತದ ಕಾಮಗಾರಿಗಳಿಗೆ ಅನುದಾನ ಒದಗಿಸಲಾಗಿದೆ, ಆದರೆ, 2020-21ನೇ ಸಾಲಿನಲ್ಲಿ ಕೋವಿಡ್-19ರ ಹಿನ್ನೆಲೆಯಲ್ಲಿ ಪ್ರತಿ ಕ್ಷೇತ್ರಕ್ಕೆ ರೂ.1.00 ಕೋಟಿ ಅನುದಾನವನ್ನು ಒದಗಿಸಲಾಗಿದ್ದು ಸದರಿ ವಿವರಗಳು ಈ ಕೆಳಕಂಡಂತಿದೆ:-<br>(ರೂ.ಕೋಟಿಗಳಲ್ಲಿ)<br>ವರ್ಷ — ಒದಗಿಸಿರುವ ಅನುದಾನ (ಪ್ರತಿಕ್ಷೇತ್ರಕ್ಕೆ)<br>2016-17 — 2.00<br>2017-18 — 2.00<br>2018-19 — 2.00<br>2019-20 — 2.00<br>2020-21 — 1.00 |
| ಆ) | ಒದಗಿಸಿರದಿದ್ದಲ್ಲಿ, 2016-17 ರಿಂದ 2020-21ರವರೆಗೆ ಯಾವ ವರ್ಷಗಳಲ್ಲಿ ಎಷ್ಟು ಅನುದಾನವನ್ನು ಕಡಿತಗೊಳಿಸಿ ಆದೇಶಿಸಲಾಗಿದೆ; (ವರ್ಷವಾರು ಅನುದಾನ ಕಡತ ಮಾಡಿರುವ ಆದೇಶಗಳ ಪ್ರತಿ ಒದಗಿಸುವುದು) | 2020-21ನೇ ಸಾಲಿನಲ್ಲಿ ಕೋವಿಡ್-19ರ ಹಿನ್ನೆಲೆಯಲ್ಲಿ ಪ್ರತಿ ಕ್ಷೇತ್ರಕ್ಕೆ ರೂ.1.00 ಕೋಟಿ ಅನುದಾನವನ್ನುಆರ್ಥಿಕ ಇಲಾಖೆಯ ಹಿಂಬರಹದಂತೆ ಕಡಿತಗೊಳಿಸಲಾಗಿರುವುದನ್ನು ಹೊರತುಪಡಿಸಿ, ಇನ್ನುಳಿದ ಯಾವುದೇ ವರ್ಷಗಳಲ್ಲಿ ಅನುದಾನವನ್ನು ಕಡಿತಗೊಳಿಸಲಾಗಿಲ್ಲ. (ದಿನಾಂಕ:13.08.2021ರ ಸುತ್ತೋಲೆಯನ್ನು ಇದರೊಂದಿಗೆ ಲಗತ್ತಿಸಿದೆ). |

...2

| | ಪ್ರಶ್ನೆ | ಉತ್ತರ |
|---|---|---|
| ಇ) | 2016-17 ರಿಂದ 2020-2021ರವರೆಗೆ ಯಾವ ಆರ್ಥಿಕ ವರ್ಷಗಳಲ್ಲಿ ಪ್ರತಿ ವರ್ಷಕ್ಕೆ ನಿಗಧಿಯಾಗಿರುವ ರೂ.2.00 ಕೋಟಿಗಳ ಅನುದಾನವನ್ನು ಸರ್ಕಾರ ಪೂರ್ಣವಾಗಿ ಪ್ರತಿ ವರ್ಷಕ್ಕೆ ಬಿಡುಗಡೆ ಮಾಡದೇ, ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಯಲ್ಲಿ ಇರುವ ಅನುದಾನವನ್ನು ಬಳಸಿಕೊಂಡು ಮಾನ್ಯ ಶಾಸಕರುಗಳ ಸೂಚಿಸಿರುವ ರೂ.2.00 ಕೋಟಿಗಳ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವಂತೆ ಆದೇಶಿಸಿದೆ; | 2018-19ನೇ ಸಾಲಿನಲ್ಲಿ ಬಂಡವಾಳ ವೆಚ್ಚದಡಿ ರೂ.127.69 ಕೋಟಿಗಳು ಬಿಡುಗಡೆಯಾಗಬೇಕಾಗಿದ್ದು, ಸದರಿ ಅನುದಾನವನ್ನು ಪೂರಕ ಅಂದಾಜಿನಲ್ಲಿ ಆರ್ಥಿಕ ಇಲಾಖೆಯು ಒದಗಿಸಿದ್ದು, ಈ ಅನುದಾನವನ್ನು ಡಿಸೆಂಬರ್-2021ರ ನಂತರ ಬಿಡುಗಡೆ ಮಾಡಲಾಗುವುದು.<br><br>2019-20ನೇ ಸಾಲಿನಲ್ಲಿ 17 ಜಿಲ್ಲೆಗಳ ಜಿಲ್ಲಾಧಿಕಾರಿಗಳ ಪಿ. ಡಿ. ಖಾತೆಯಲ್ಲಿ ಲಭ್ಯವಿದ್ದ ಅನುದಾನದಲ್ಲಿ ಶೇ. 75 ರಷ್ಟು ವೆಚ್ಚವಾಗದ ಕಾರಣ, ಬಂಡವಾಳ ವೆಚ್ಚದಡಿಯಲ್ಲಿ ಎರಡನೆಯ ಕಂತಿನ ಅನುದಾನ ಬಿಡುಗಡೆಯಾಗ ಬೇಕಾಗಿದ್ದು, ಲಭ್ಯವಿರುವ ಅನುದಾನದಲ್ಲಿ ಶೇ. 75 ರಷ್ಟು ವೆಚ್ಚವಾದ ನಂತರ ಬಿಡುಗಡೆ ಮಾಡಲಾಗುವುದು.<br><br>2020-21ನೇ ಸಾಲಿನಲ್ಲಿ ಕೋವಿಡ್-19ರ ಕಾರಣದಿಂದ ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯ ಅನುದಾನವನ್ನು ರೂ. 1.00 ಕೋಟಿಗಳಿಗೆ ಮಿತಿಗೊಳಿಸಲಾಗಿರುತ್ತದೆ ಹಾಗೂ 2020-21ನೇ ಸಾಲಿನ ಅನುದಾನದಲ್ಲಿ ಪ್ರತಿ ಕ್ಷೇತ್ರದಿಂದ ರೂ. 1.00 ಕೋಟಿಗಳನ್ನು ವರ್ಗಾಯಿಸಿ, 2019-20ನೇ ಸಾಲಿಗೆ ಬಳಕೆ ಮಾಡಲು ದಿನಾಂಕ:13.08.2021 ಸುತ್ತೋಲೆಯಲ್ಲಿ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ(ಪ್ರತಿ ಲಗತ್ತಿಸಿದೆ).<br><br>2021-22ನೇ ಸಾಲಿನಲ್ಲಿ ಪ್ರತಿ ಕ್ಷೇತ್ರಕ್ಕೆ ರೂ.1.00 ಕೋಟಿಗಳನ್ನು ಬಿಡುಗಡೆಗೊಳಿಸಲಾಗಿದ್ದು, ಮೂರನೇ ಕಂತಿನ ಅನುದಾನ ಬಿಡುಗಡೆ ಮಾಡಲು ಆರ್ಥಿಕ ಇಲಾಖೆ ಸಹಮತಿ ನೀಡಲಾಗಿದ್ದು, ಪ್ರಸಕ್ತ ಮಾಹೆಯಲ್ಲಿ ಬಿಡುಗಡೆ ಮಾಡಲಾಗುತ್ತದೆ. ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಯಲ್ಲಿ ಲಭ್ಯವಿರುವ ಅನುದಾನ ಹಾಗೂ 3ನೇ ಕಂತಿನ ಅನುದಾನ ಸೇರಿ ಒಟ್ಟು ಅನುದಾನದಲ್ಲಿ ಶೇ.75 ರಷ್ಟು ವೆಚ್ಚವಾದಲ್ಲಿ, ನಾಲ್ಕನೇ ಕಂತಿನ ಅನುದಾನ ಬಿಡುಗಡೆ ಮಾಡಲಾಗುವುದು. |
| ಈ) | ಸದರಿ ಸಾಲಿನಲ್ಲಿ, ಜಿಲ್ಲಾಧಿಕಾರಿಗಳ ಪಿ.ಡಿ ಖಾತೆಯಲ್ಲಿ ಬಾಕಿ ಇದ್ದ ಅನುದಾನವೆಷ್ಟು; ಬಳಸಿಕೊಂಡಿರುವ ಅನುದಾನವೆಷ್ಟು: (ಜಿಲ್ಲಾವಾರು, ವರ್ಷವಾರು ಮಾಹಿತಿ ನೀಡುವುದು) | ಸದರಿ ಸಾಲಿನಲ್ಲಿ, ಜಿಲ್ಲಾಧಿಕಾರಿಗಳ ಪಿ.ಡಿ ಖಾತೆಯಲ್ಲಿ ಬಾಕಿ ಇದ್ದ ಅನುದಾನ ಹಾಗೂ ಬಳಸಿಕೊಂಡಿರುವ ಅನುದಾನದ ವಿವರಗಳನ್ನು ಜಿಲ್ಲಾವಾರು, ವರ್ಷವಾರು ಮಾಹಿತಿಯನ್ನು ಅನುಬಂಧದಲ್ಲಿ ನೀಡಲಾಗಿದೆ. |

**ಸಂಖ್ಯೆ: ಪಿಡಿಎಸ್ 149 ಕೆಎಲ್ಎಸ್ 2021**

(ಮುನಿರತ್ನ)
ಮಾನ್ಯ ತೋಟಗಾರಿಕೆ ಹಾಗೂ ಯೋಜನೆ,
ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ
ಇಲಾಖಾ ಸಚಿವರು.